**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 254 ಗ್ರಾಪಂಕಾ 2016(ಭಾಗ–3)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 09.09.2016

**ಅಧಿಕೃತ ಜ್ಞಾಪನ**

**ವಿಷಯ:** ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಅಂತರ್ ಜಿಲ್ಲಾ ವರ್ಗಾವಣೆಯ ಬಗ್ಗೆ.

****

ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 16–ಎ ರನ್ವಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಅವರ ಕೋರಿಕೆಯ ಮೇರೆಗೆ ಅವರು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯಿಂದ **ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ** ಅಂತರ ಜಿಲ್ಲಾ ವರ್ಗಾವಣೆ ಮಾಡಿ, ಕೆಳಕಂಡ ಎಲ್ಲಾ ಷರತ್ತುಗಳನ್ನು ಪೂರೈಸುವ ನಿಬಂಧನೆಗೊಳಪಡಿಸಿ ಆದೇಶಿಸಿದೆ.

| ಕ್ರ.ಸಂ. | ನೌಕರರ ಹೆಸರು | ಹಾಲಿ ಕಾರ್ಯನಿರ್ವಹಿಸುತ್ತಿರುವ ಸ್ಥಳ ಮತ್ತು ಜಿಲ್ಲೆ | ವರ್ಗಾಯಿಸಿರುವ ಜಿಲ್ಲೆ |
|---|---|---|---|
| 1 | ಶ್ರೀಮತಿ ಸೌಮ್ಯ ವಿ. | ಯಡ್ಡಿಗೊಂಡ ಗ್ರಾಮ ಪಂಚಾಯತಿ, ಬ್ಯಾಡಗಿ ತಾಲ್ಲೂಕು, ಹಾವೇರಿ ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 2 | ಶ್ರೀಮತಿ ಗೀತಾವಾಣಿ ಸಿ. | ಕಮಠಾಣ ಗ್ರಾಮ ಪಂಚಾಯತಿ, ಬೀದರ ತಾಲ್ಲೂಕು ಮತ್ತು ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 3 | ಶ್ರೀಮತಿ ನರ್ಮದಾ ಎಂ.ಆರ್. | ಚಿಕ್ಕಾಡೆ ಗ್ರಾಮ ಪಂಚಾಯತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 4 | ಶ್ರೀ ರವಿಶಂಕರ್ ಎ.ಎನ್. | ಕೊತ್ತಗೋಡು ಗ್ರಾಮ ಪಂಚಾಯತಿ, ಶೃಂಗೇರಿ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 5 | ಶ್ರೀ ಸಿದ್ಧರಾಜು ಕೆ.ಸಿ. | ಯಾಲ್ಡೇರಿ ಗ್ರಾಮ ಪಂಚಾಯತಿ, ಯಾದಗಿರಿ ತಾಲ್ಲೂಕು ಮತ್ತು ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 6 | ಶ್ರೀ ಕೃಷ್ಣಮೂರ್ತಿ ಜೆ.ಸಿ. | ವಿಶ್ವನಾಥನಹಳ್ಳಿ ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 7 | ಶ್ರೀಮತಿ ಸುಮಿತ್ರ | ಕಾಡಜ್ಜಿ ಗ್ರಾಮ ಪಂಚಾಯತಿ, ದಾವಣಗೆರೆ ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 8 | ಶ್ರೀ ಮಲ್ಲೇಶ್ | ಕೆಸ್ತೂರು ಗ್ರಾಮ ಪಂಚಾಯತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 9 | ಶ್ರೀ ತಿರುಪತಿ ಬಿನ್ ತಿಮ್ಮಪ್ಪ | ಗೋಳಿಕೊಟ್ಟಿ ಗ್ರಾಮ ಪಂಚಾಯತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 10 | ಶ್ರೀಮತಿ ಪಾರ್ವತಿ ವಿ. | ಕಾತರಕಿ ಗುಡ್ಲಾನೂರು ಗ್ರಾಮ ಪಂಚಾಯತಿ, ಕೊಪ್ಪಳ ತಾಲ್ಲೂಕು ಮತ್ತು ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |

(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಂದ ಅನುಮೋದಿತ)

**ಷರತ್ತುಗಳು:**

1) ಮೊದಲು ನೌಕರರು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯಲ್ಲಿನ ತಮ್ಮ ಜೇಷ್ಠತೆಯನ್ನು ಬಿಟ್ಟು ಕೊಡಲು ಹಾಗೂ ವರ್ಗಾವಣೆಗೊಂಡ ಜಿಲ್ಲೆಯಲ್ಲಿನ ತನ್ನ ವೃಂದದ ನೌಕರರ ಜೇಷ್ಠತಾ ಪಟ್ಟಿಯಲ್ಲಿ ಕೊನೆಯವನಾಗಿ ಸೇರ್ಪಡೆಗೊಳ್ಳಲು ಸಿದ್ಧರಿರುವುದಾಗಿ ಲಿಖಿತವಾಗಿ ಒಪ್ಪಿಗೆ ನೀಡತಕ್ಕದ್ದು. ಯಾವ ಜಿಲ್ಲೆಗೆ ವರ್ಗಾವಣೆ ಆಗಿ ಹೋಗಬೇಕು ಆ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ನೇರ ನೇಮಕಾತಿ ಕೋಟಾದಡಿ ಹುದ್ದೆಯು ಖಾಲಿ ಇರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು. ಇದನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಬಿಡುಗಡೆ ಮಾಡಬೇಕಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಲಿಖಿತವಾಗಿ ಖಚಿತಪಡಿಸಿಕೊಳ್ಳತಕ್ಕದ್ದು.
2) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ ಸದರಿ ನೌಕರರ ಪರಿವೀಕ್ಷಣಾವಧಿ ತೃಪ್ತಿಕರವಾಗಿ ಘೋಷಣೆಯಾಗಿರಬೇಕು.
3) ನೌಕರರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ ಇರಬಾರದು.
4) ಇವರ ಜೇಷ್ಠತೆಯು ವರ್ಗಾವಣೆ ಹೊಂದಿದ ಜಿಲ್ಲೆಯಲ್ಲಿ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ ನಿಯಮಗಳು) ನಿಯಮಗಳು, 1957 ರ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.
5) ಈ ನೌಕರರು ಯಾವುದೇ ವರ್ಗಾವಣೆ ಭತ್ಯೆ, ಪ್ರಯಾಣ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.
6) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಹುದ್ದೆ ಲಭ್ಯವಿದ್ದಲ್ಲಿ ಮಾತ್ರ ಪರಿಗಣಿಸತಕ್ಕದ್ದು.
7) ಯಾವುದೇ ಕಾರಣಕ್ಕೂ ಬಡ್ತಿ ಕೋಟಾದ ಹುದ್ದೆಯ ಎದುರು ಪರಿಗಣಿಸತಕ್ಕದ್ದಲ್ಲ.
8) ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 16ಎ ರನ್ವಯ ಒಂದಕ್ಕಿಂತ ಹೆಚ್ಚು ಸಲ ಒಂದು ಜಿಲ್ಲಾ ವೃಂದದಿಂದ ಮತ್ತೊಂದು ಜಿಲ್ಲಾ ವೃಂದಕ್ಕೆ ವರ್ಗಾವಣೆ ಮಾಡಲು ಅವಕಾಶವಿರುವುದಿಲ್ಲ. ಈಗಾಗಲೇ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಒಂದು ಬಾರಿ ಅಂತರ್ ಜಿಲ್ಲೆ ವರ್ಗಾವಣೆ ಆಗಿದ್ದರೆ ಮತ್ತೊಮ್ಮೆ ಪರಿಗಣಿಸಲು ಅವಕಾಶವಿರುವುದಿಲ್ಲ.

ಮೇಲಿನ ನಿಬಂಧನೆಗಳು ಪೂರೈಸುವ ಬಗ್ಗೆ ಖಚಿತಪಡಿಸಿಕೊಂಡ ನಂತರ ಮಾತ್ರ ಸದರಿ ನೌಕರರನ್ನು ಅವರ ಹುದ್ದೆಯಿಂದ ಬಿಡುಗಡೆ ಮಾಡತಕ್ಕದ್ದು.

(ಟಿ.ಎ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹಾವೇರಿ, ಮಂಡ್ಯ, ಬೀದರ, ಚಿಕ್ಕಮಗಳೂರು, ಯಾದಗಿರಿ, ಚಿತ್ರದುರ್ಗ, ದಾವಣಗೆರೆ, ದಕ್ಷಿಣ ಕನ್ನಡ ಮತ್ತು ಕೊಪ್ಪಳ ಜಿಲ್ಲಾ ಪಂಚಾಯತಿಗಳು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
4. ನಿರ್ದೇಶಕರು (ಪಂ.ರಾಜ್–1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಸಂಬಂಧಿಸಿದ ನೌಕರರಿಗೆ.
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.